ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಐ.ಸಿ.ಟಿ ಫೇಸ್-3 ಯೋಜನೆ

ಶ್ರೀ ಎಂ.ಸಿ. ವೇಣುಗೋಪಾಲ್ (ವಿಧಾನ ಸಭೆಯಿಂದ ಚುನಾಯಿತರಾದವರು):-

1013 (1167) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿಕ್ಷಣ ಇಲಾಖೆಯು ಐ.ಸಿ.ಟಿ ಫೇಸ್-3 ಯೋಜನೆಯ ಪ್ರಕ್ರಿಯೆಯನ್ನು 2008-09 ನೇ ಸಾಲಿನಲ್ಲಿ ಪ್ರಾರಂಭಿಸಿದ್ದರೂ, ಇಲ್ಲಿಯವರೆಗೂ, ಪೂರ್ಣಗೊಳಿಸದಿರಲು ಪ್ರಮುಖ ಕಾರಣಗಳೇನು;

(ಆ) ಈ ಯೋಜನೆಯಡಿಯಲ್ಲಿ ಕಂಪ್ಯೂಟರ್‌ಗಳನ್ನು ಖರೀದಿಸಿರುವ ಮುನ್ನವೇ ಯು.ಪಿ.ಎಸ್., ಎಲ್.ಸಿ.ಡಿ. ಪ್ರೊಜೆಕ್ಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಮಾಹಿತಿ ತಂತ್ರಜ್ಞಾನ ಉಪಕರಣಗಳು ಕಾರ್ಯನಿರ್ವಹಿಸುತ್ತಿವೆಯೇ;

(ಇ) ಮೇಲ್ಕಂಡ ಉಪಕರಣಗಳನ್ನು ಸುಸ್ಥಿತಿಯಲ್ಲಿಡಲು ವಾರ್ಷಿಕ ಸೇವಾ ನಿರ್ವಹಣೆ ಗುತ್ತಿಗೆಯನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಈ) ಸದರಿ ಯೋಜನೆಯನ್ನು ಪ್ರಾರಂಭಿಸಿ ಹನ್ನೊಂದು ವರ್ಷಗಳು ಕಳೆದರೂ, ಪೂರ್ಣಗೊಳಿಸದೆ ಶಾಲೆಗಳ ಬಡ ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗಲು ಕಾರಣಕರ್ತರಾದ ಇಲಾಖೆಯ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾದ ಶಿಸ್ತಿನ ಕ್ರಮವೇನು?